All India Radio: Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

18.03.2026 2.30 p.m.

<><><><>

ಮುಖ್ಯಾಂಶಗಳು

- ಸಕಾಲ ಯೋಜನೆಯಡಿ ಶೇಕಡ ೯೯ರಷ್ಟು ಅರ್ಜಿಗಳಿಗೆ ಕಾಲಮಿತಿಯೊಳಗೆ ಸೇವೆ: ಪರಿಷತ್‌ನಲ್ಲಿ ಸಚಿವ ಕೃಷ್ಣಬೈರೇಗೌಡ ಸ್ಪಷ್ಟನೆ
- ಅಂಗನವಾಡಿ, ಆಶಾಕಾರ್ಯಕರ್ತೆಯರ ಗೌರವಧನ ಹೆಚ್ಚಿಸಲು ಸರ್ಕಾರದಿಂದ ಹಣಕಾಸು ಇಲಾಖೆಗೆ ಪ್ರಸ್ತಾವನೆ
- ಬೆಂಗಳೂರಿನಲ್ಲಿ ೨ನೇ ವಿಮಾನ ನಿಲ್ದಾಣ ನಿರ್ಮಾಣ ಕುರಿತಂತೆ ಕೇಂದ್ರ ಸಚಿವರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚರ್ಚೆ
- ಬಳ್ಳಾರಿಯಲ್ಲಿ ಮಾದಕವಸ್ತು ಮುಕ್ತ ಭಾರತ ವಾಕಥಾನ್‌ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಚಾಲನೆ
- ಮಳೆಗಾಲ ಆರಂಭಕ್ಕೂ ಮುನ್ನ ಬೆಂಗಳೂರಿನಲ್ಲಿ ರಾಜಕಾಲುವೆ ಕಾಮಗಾರಿ ಪೂರ್ಣಗೊಳಿಸಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್‌ರಾವ್ ಸೂಚನೆ

<><><><>

ಸಕಾಲ ಯೋಜನೆ ಅಡಿಯಲ್ಲಿ ಪ್ರಸಕ್ತ ವರ್ಷದಲ್ಲಿ ಶೇಕಡ ೯೯.೩೫ರಷ್ಟು ಅರ್ಜಿಗಳಿಗೆ ನಿಗದಿತ ಕಾಲಮಿತಿಯೊಳಗೆ ಸೇವೆ ಒದಗಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಪರಿಷತ್‌ನಲ್ಲಿಂದು ಸದಸ್ಯ ಕೆ.ಅಬ್ದುಲ್ ಜಬ್ಬರ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ನಾಡ ಕಚೇರಿ ಹಾಗೂ ತಹಶೀಲ್ದಾರ್ ಕಚೇರಿಗಳಲ್ಲಿ ಜನರಿಗೆ ಎಲ್ಲಾ ಸೇವೆಗಳು ತ್ವರಿತವಾಗಿ ಲಭ್ಯವಾಗಬೇಕು ಎಂಬ ಹಿನ್ನೆಲೆಯಲ್ಲಿ ಸಾಕಷ್ಟು ಸುಧಾರಣೆಗಳನ್ನು ತರಲಾಗಿದೆ. ಜಾತಿ, ಆದಾಯ ಪ್ರಮಾಣಪತ್ರ ಸೇರಿದಂತೆ ಸಕಾಲ ಯೋಜನೆಯಡಿ ಲಭ್ಯವಾಗುವ ಎಲ್ಲ ಸೇವೆಗಳನ್ನು ನಿಗದಿತ ಅವಧಿಯಲ್ಲಿ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಭೂ-ಸುರಕ್ಷಾ ಯೋಜನೆಯ ಬಗ್ಗೆ ಸದನಕ್ಕೆ ಮಾಹಿತಿ ನೀಡಿದ ಅವರು, ರಾಜ್ಯದಲ್ಲಿ ಎಲ್ಲಾ ಭೂದಾಖಲೆಗಳು ಗಣಕೀಕರಣವಾಗುತ್ತಿದೆ. ಈಗಾಗಲೇ ೭೪ ಕೋಟಿ ಪುಟಗಳು ಸ್ಕ್ಯಾನ್ ಆಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ. ಕಂದಾಯ ಇಲಾಖೆಯನ್ನು ಜನಸ್ನೇಹಿಗೊಳಿಸುವ ನಿಟ್ಟಿನಲ್ಲಿ ಇನ್ನೂ ಸುಧಾರಣೆಗೊಳಿಸಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ.

<><><><>

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕರು ಹಾಗೂ ಆರೋಗ್ಯ ಇಲಾಖೆಯ ಕಾರ್ಯಕತೆಯರಿಗೆ ಗೌರವಧನ ಹೆಚ್ಚಿಸುವ ಕುರಿತಂತೆ ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಲಕ್ಷ್ಮಿಹೆಬ್ಬಾಳ್ಕರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಇಂದು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಗೌರವ ಧನ ಹೆಚ್ಚಿಸುವಂತೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಆಶಾಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರ ೨ ಸಾವಿರ ರೂಪಾಯಿ ಹಾಗೂ ರಾಜ್ಯ ಸರ್ಕಾರ ೫ ಸಾವಿರ ರೂಪಾಯಿ ನೀಡುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಈ ವೇಳೆ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ ಹಾಗೂ ಪ್ರಭು ಚೌಹಾಣ್ ಮಾತನಾಡಿ, ಗ್ರಾಮೀಣಾ ಭಾಗದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಆಶಾ ಕಾರ್ಯಕರ್ತೆಯರ ಸೇವೆ ಅಮೂಲ್ಯವಾಗಿದ್ದು, ಗೌರವ ಧನ ಹೆಚ್ಚಿಸಬೇಕೆಂದು ಒತ್ತಾಯಿಸಿದರು.

<><><><>

ಕಡಲ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರು ದೋಣಿ ಹಾನಿ, ಇನ್ನಿತರ ಅವಘಡಗಳಿಂದ ಸಾವನ್ನಪ್ಪಿದರೆ ಅವರ ಕುಟುಂಬಕ್ಕೆ ೧೦ ಲಕ್ಷ ರೂಪಾಯಿ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಮೀನುಗಾರಿಕಾ ಸಚಿವ ಮಂಕಾಳ ವೈದ್ಯ ಮೇಲ್ಮನೆಯಲ್ಲಿಂದು ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್‌ನ ಮಂಜುನಾಥ್ ಬಂಡಾರಿ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಗಾಯಗೊಂಡವರಿಗೆ ವೈದ್ಯಕೀಯ ವೆಚ್ಚಕ್ಕಾಗಿ ೩ ಲಕ್ಷ ರೂಪಾಯಿವರೆಗೆ ಪರಿಹಾರ ನೀಡಲಾಗುವುದು ಎಂದು ಹೇಳಿದ್ದಾರೆ. ಬಂದರುಗಳಲ್ಲಿ ಹೂಳೆತ್ತುವ ಕಾಮಗಾರಿಗಳನ್ನು ೨ ಕೋಟಿ ರೂಪಾಯಿ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಮೀನುಗಾರಿಕೆ ಇಲಾಖೆಯಿಂದ ಕೈಗೊಳ್ಳಲಾಗುವ ಎಲ್ಲ ಹೂಳೆತ್ತುವ ಕಾಮಗಾರಿಗಳನ್ನು ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖಾಂತರ ಕೈಗೊಳ್ಳಲಾಗುತ್ತಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

<><><><>

ರಾಜ್ಯದಲ್ಲಿರುವ ಓವರ್‌ಹೆಡ್ ಟ್ಯಾಂಕ್‌ಗಳ ಸ್ಥಿತಿಗತಿ ಕುರಿತು ಅಧ್ಯಯನ ನಡೆಸಲಾಗಿದ್ದು, ಅವುಗಳ ಸುಧಾರಣೆ ಹಾಗೂ ದುರಸ್ಥಿಗಾಗಿ ೩೦ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡುತ್ತಿರುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ್ ಕೇಳಿದ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಸರ್ಕಾರ ಆರಂಭದಲ್ಲೇ ಓವರ್‌ಹೆಡ್ ಟ್ಯಾಂಕ್‌ಗಳ ಆಡಿಟ್ ನಡೆಸಿದೆ. ಈ ಪ್ರಕಾರ ನಂಜನಗೂಡಿನಲ್ಲಿ ೨೧೨ ಓವರ್‌ಹೆಡ್ ಟ್ಯಾಂಕ್‌ಗಳಿದ್ದು, ಅವುಗಳಲ್ಲಿ ೫೮ ಉತ್ತಮ ಸ್ಥಿತಿಯಲ್ಲಿವೆ ಎಂದು ತಿಳಿಸಿದ್ದಾರೆ.

<><><><>

ವಿಧಾನಸಭೆಯಲ್ಲಿಂದು ಗೌರವ ಅಪರಾಧಗಳನ್ನು ನಿಗ್ರಹಿಸಲು ಇವ ನಮ್ಮವ ಇವ ನಮ್ಮವ ಮಸೂದೆಯನ್ನು ಸರ್ಕಾರ ಮಂಡಿಸಲಿದೆ. ಈ ಮಸೂದೆಯು ಅಂತರ್‌ಜಾತಿ ಅಥವಾ ಅಂತರ್ ಸಮುದಾಯ ವಿವಾಹಗಳಿಗೆ ಜಾತಿ ಆಧಾರಿತ ಆಕ್ಷೇಪಣೆಗಳಿಂದ ಉಂಟಾಗುವ ಮರ್ಯಾದಾ ಹತ್ಯೆಗಳು ಮತ್ತು ಹಿಂಸಾಚಾರವನ್ನು ನಿಗ್ರಹಿಸುವ ಗುರಿ ಹೊಂದಿದೆ.

<><><><>

ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನವದೆಹಲಿಯಲ್ಲಿ ಇಂದು ಭೇಟಿ ಮಾಡಿದ್ದಾರೆ. ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಹಾಗೂ ಸ್ಕೈಡೆಕ್ ನಿರ್ಮಾಣ ಸಂಬಂಧ ಸಚಿವರೊಂದಿಗೆ ಸಮಾಲೋಚನೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಸಚಿವ ಎನ್.ಎಸ್.ಬೋಸರಾಜು, ದೆಹಲಿಯಲ್ಲಿ ಕರ್ನಾಟಕ ಸರ್ಕಾರ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಸಂಸದ ಕುಮಾರ ನಾಯಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಉಪಸ್ಥಿತರಿದ್ದರು.

<><><><>

ಬಳ್ಳಾರಿಯ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ, ದಿಶಾ ಬೋಧ್ ಪ್ರತಿಷ್ಠಾನ ಮತ್ತು ಮಾದಕ ದ್ರವ್ಯ ನಿಯಂತ್ರಣ ಘಟಕದ ಸಹಯೋಗದಲ್ಲಿ ಆಯೋಜಿಸಿದ್ದ "ಮಾದಕವಸ್ತು ಮುಕ್ತ ಭಾರತ-ಯುವ ಶುದ್ಧೀಕರಣ ಅಭಿಯಾನ" ವಾಕ್‌ಥಾನ್‌ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ರಾಜ್ಯಪಾಲರು, ಮಾದಕ ವಸ್ತು ವ್ಯಸನವು ವೈಯಕ್ತಿಕ ಸಮಸ್ಯೆ ಮಾತ್ರವಲ್ಲದೆ ಸಾಮಾಜಿಕ, ಆರ್ಥಿಕ ಮತ್ತು ಆರೋಗ್ಯದ ಸವಾಲೂ ಆಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ಅಭಿಯಾನವು ಆರೋಗ್ಯಕರ, ಸಬಲೀಕರಣಗೊಂಡ ಮತ್ತು ಶಿಸ್ತಿನ ಸಮಾಜವನ್ನು ನಿರ್ಮಿಸುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ. "ಯುವ ಶುದ್ಧಿ ಅಭಿಯಾನ" ಮತ್ತು "ನಶಾ ಮುಕ್ತ ಭಾರತ" ನಂತಹ ಉಪಕ್ರಮಗಳ ಮೂಲಕ, ಕರ್ನಾಟಕದ ಯುವಕರನ್ನು ತಪ್ಪು ಮಾರ್ಗದಿಂದ ರಕ್ಷಿಸುವಲ್ಲಿ ಗಮನಾರ್ಹ ಯಶಸ್ಸನ್ನು ಸಾಧಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರಿನಲ್ಲಿ ರಾಜಕಾಲುವೆ ಅಭಿವೃದ್ಧಿ ಕಾಮಗಾರಿಗಳನ್ನು ಮಳೆಗಾಲ ಪ್ರಾರಂಭವಾಗುವುದಕ್ಕೂ ಮುನ್ನ ಪೂರ್ಣಗೊಳಿಸಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ರಾಜಕಾಲುವೆ ಅಭಿವೃದ್ಧಿ ಕಾಮಗಾರಿಗಳ ಕುರಿತು ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಒಂದು ಕೆರೆಯಿಂದ ಮತ್ತೊಂದು ಕೆರೆಗೆ ಸಂಪರ್ಕ ಕಲ್ಪಿಸುವ ಮಳೆನೀರು ಕಾಲುವೆಗಳ ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿದೆ ಎಂದು ಹೇಳಿದ್ದಾರೆ. ಮೇ ತಿಂಗಳಲ್ಲಿ

ಆರಂಭವಾಗುವ ಮುಂಗಾರು ಪೂರ್ವ ಮಳೆಗಾಲಕ್ಕೂ ಮುನ್ನ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ನಿರ್ದೇಶನ ನೀಡಿದ್ದಾರೆ. ಹೊಸದಾಗಿ ಕೈಗೆತ್ತಿಕೊಳ್ಳಲಾಗುತ್ತಿರುವ ಮಳೆನೀರು ಕಾಲುವೆಗಳಲ್ಲಿಯೂ ಪ್ರಕೃತಿ ಆಧಾರಿತ ಪರಿಹಾರಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರಿನಲ್ಲಿ ಬಿಸಿಲಿನ ತಾಪ ಹೆಚ್ಚಾಗಿರುವುದರಿಂದ ನೇರಳಾತೀತ ವಿಕಿರಣದ ಮಟ್ಟ ಏರಿಕೆಯಾಗಿದ್ದು, ಆರೋಗ್ಯ ಅಪಾಯಗಳ ಬಗ್ಗೆ ವೈದ್ಯರು ಎಚ್ಚರಿಕೆ ನೀಡಿದ್ದಾರೆ. ಹೆಚ್ಚಿನ ಬಿಸಿಲಿಗೆ ಒಡ್ಡಿಕೊಳ್ಳುವುದರಿಂದ ರೋಗ ನಿರೋಧಕ ಶಕ್ತಿ ಕಡಿಮೆಯಾಗುವುದು ಮತ್ತು ಶಾಖ ಸಂಬಂಧಿತ ಕಾಯಿಲೆಗಳಿಗೆ ಕಾರಣವಾಗಬಹುದು ಎಂದು ಎಚ್ಚರಿಕೆ ನೀಡಿದ್ದಾರೆ. ಕಳೆದ ವಾರ ಬೆಂಗಳೂರಿನಲ್ಲಿ ನೇರಳಾತೀತ ಸೂಚ್ಯಂಕ ಮಟ್ಟ ೧೦ ರಿಂದ ೧೩ರವರೆಗೆ ದಾಖಲಾಗಿತ್ತು. ಇದರಿಂದ ಕಣ್ಣಿನ ಉರಿಯೂತ ಹಾಗೂ ಚರ್ಮಕ್ಕೆ ಸಂಬಂಧಿಸಿದ ಅಪಾಯಗಳು ಉಂಟಾಗಲಿದೆ ಎಂದು ವೈದ್ಯರು ಎಚ್ಚರಿಕೆ ನೀಡಿದ್ದಾರೆ. ಈ ಕುರಿತಂತೆ ಹಿರಿಯ ಚರ್ಮರೋಗ ತಜ್ಞ ಡಾ.ಶ್ರೀಚರಿತ್‌ಶೆಟ್ಟಿ ಆಕಾಶವಾಣಿಯೊಂದಿಗೆ ಹೆಚ್ಚಿನ ಮಾಹಿತಿಯನ್ನು ಹಂಚಿಕೊಂಡಿದ್ದಾರೆ.

ಧ್ವನಿ : ಡಾ.ಶ್ರೀಚರಿತ್‌ಶೆಟ್ಟಿ

<><><><>

ರಾಜ್ಯಾದ್ಯಂತ ಇಂದಿನಿಂದ ೨೦೨೬ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ-೧ ಆರಂಭವಾಗಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ಬೆಂಗಳೂರಿನ ಮಲ್ಲೇಶ್ವರಂನ ಕರ್ನಾಟಕ ಪಬ್ಲಿಕ್ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ತುಂಬಿ ಶುಭ ಹಾರೈಸಿದರು. ಈ ವರ್ಷ ರಾಜ್ಯಾದ್ಯಂತ ಒಟ್ಟು ೮ ಲಕ್ಷದ ೬೫ ಸಾವಿರದ ೯೮೮ ವಿದ್ಯಾರ್ಥಿಗಳು ೨ ಸಾವಿರದ ೮೭೦ ಕೇಂದ್ರಗಳಲ್ಲಿ ಪರೀಕ್ಷೆ ಬರೆಯುತ್ತಿದ್ದಾರೆ. ವಿಶೇಷವಾಗಿ ೧೬ ದೃಷ್ಟಿಮಾಂದ್ಯ ಮಕ್ಕಳು ಬರಹಗಾರರ ಸೌಲಭ್ಯ ಬಳಸದೆ, ಸ್ವತಃ ಲ್ಯಾಪ್‌ಟಾಪ್ ಬಳಸಿ ಪರೀಕ್ಷೆ ಬರೆಯುತ್ತಿರುವುದು ವಿಶೇಷವಾಗಿದೆ. ಮಂಡ್ಯ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ ಡಾ. ಕುಮಾರ ಮಂಡ್ಯ ನಗರದಲ್ಲಿನ ಪುರಸಭೆ ಕಾಲೇಜಿನ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮೊದಲ ದಿನವಾದ ಇಂದು ೫೨ ಪರೀಕ್ಷಾ ಕೇಂದ್ರಗಳಲ್ಲಿ ಪ್ರಥಮ ಭಾಷೆಯ ಪರೀಕ್ಷೆ ಸುಗಮವಾಗಿ ನಡೆದಿದೆ.

<><><><>

ಬಾಗಲಕೋಟೆ ಉಪಚುನಾವಣೆ ಟಿಕೆಟ್ ಹಂಚಿಕೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಾಜಿ ಶಾಸಕ ದಿವಂಗತ ಹೆಚ್.ವೈ.ಮೇಟಿ ಅವರ ಪುತ್ರರು ಹಾಗೂ ಪುತ್ರಿಯರೊಂದಿಗೆ ಪ್ರತ್ಯೇಕವಾಗಿ ಮಾತುಕತೆ ನಡೆಸಿದರು. ಹೆಚ್.ವೈ.ಮೇಟಿ ನಿಧನದಿಂದಾಗಿ

ತೆರವಾಗಿದ್ದ ಬಾಗಲಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಏಪ್ರಿಲ್ ೯ ರಂದು ಚುನಾವಣೆ ನಡೆಯಲಿದೆ. ಕಾಂಗ್ರೆಸ್‌ನಿಂದ ಮೇಟಿ ಅವರ ಪುತ್ರರು ಹಾಗೂ ಪುತ್ರಿಯರು ಟಿಕೆಟ್ ಆಕಾಂಕ್ಷಿಗಳಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತುಕತೆ ನಡೆಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>